**ದಿನಾಂಕಃ 04.08.2023.**

**P.W 1**

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ.ಕೆ.ಪಿ.ಎಸ್., ವಕೀಲರಿಂದಃ**

ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸುತ್ತಿದ್ದೇನೆಃ-

1. ಸರ್ವೆ ನಂ. 58/6 ರ ಆರ್ ಟಿ ಸಿ.

2. ಮ್ಯುಟೇಷನ್ ಆದೇಶ ಎಂ. ಆರ್.ನಂ.ಟಿ2.

ಇವುಗಳನ್ನು ಕ್ರಮವಾಗಿ ಈಗ ನಿಪಿ.4 ಮತ್ತು 5 ಎಂದು ಗುರುತಿಸಲಾಯಿತು.

**ಎದುರುದಾರರ ಪರ ವಕೀಲರ ವಿನಂತಿಯ ಮೇರೆಗೆ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).

**ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ.**

(ನಿಂಗಪ್ಪ ಪರಶುರಾಮ ಕೋಪರ್ಡೆ)

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ರಾಮನಗರ.**

**ದಿನಾಂಕ ೀ 15.11.2024**

**(ಸಾಕ್ಷಿಗೆ ಪ್ರಮಾಣ ಮಾಡಿಸಲಾಯಿತು.)**

**ಪಿ ಡಬ್ಲ್ಯೂ - 1**

**ಪಾಟೀ ಸವಾಲುಃ ಎದುರುದಾರರ ಪರ ಶ್ರೀ.ಜೆ.ಹೆಚ್.ಎಸ್.ಪಿ. ವಕೀಲರಿಂದಃ**

ನನ್ನ ಜಮೀನಿನ ಸರ್ವೆ ನಂ.ಗಳು 58/6. ಆ ಜಮೀನಿನಲ್ಲಿ 15 ಗುಂಟೆ ಪ್ರದೇಶದಲ್ಲಿ ಎದುರುದಾರರು ಲೈನ್ ಎಳೆದಿದ್ದಾರೆ. ನನ್ನ ಜಮೀನಿನಲ್ಲಿ ಎದುರುದಾರರು ಕೇವಲ 14 ವರೆ ಗುಂಟೆಯಲ್ಲಿ ಮಾತ್ರ ಲೈನು ಎಳೆದಿದ್ದಾರೆ ಎಂದರೆ ಸರಿ. ನನ್ನ ಜಮೀನಿನ ಅಪಮೌಲ್ಯಕ್ಕಾಗಿ ಎದುರುದಾರರು ನನ್ನ ಖಾತೆಗೆ 2,39,250/- ರೂ.ಗಳನ್ನು ಜಮಾ ಮಾಡಿದ್ದಾರೆ ಎಂದರೆ ಸರಿ. ಲೈನು ಎಳೆಯುವ ಕಾಲಕ್ಕೆ ನನ್ನ ಜಮೀನಿನಲ್ಲಿ ಆಗಿದ್ದ ಬೆಳೆ ನಷ್ಟ ಪರಿಹಾರದ ಬಾಬ್ತು 18,304/- ರೂ.ಗಳನ್ನು ಕೊಟ್ಟಿದ್ದಾರೆ ಎಂದರೆ ಸರಿ.

2. ನನ್ನ ಜಮೀನಿನಲ್ಲಿದ್ದ 2 ಕಾಡು ಮರಗಳನ್ನು ಕಟಾವು ಮಾಡಿದರ ಬಾಬ್ತು ಎದುರುದಾರರು ನನಗೆ 8,855/- ರೂ.ಗಳನ್ನು ಕೊಟ್ಟಿದ್ದಾರೆ ಎಂದರೆ ಸರಿ. ಎದುರುದಾರರು ಒಟ್ಟಾರೆಯಾಗಿ ನನಗೆ 2,66,409/- ರೂ.ಗಳನ್ನು ಖಾತೆಗೆ ಜಮಾ ಮಾಡಿದ್ದಾರೆ ಎಂದರೆ ಸರಿ. 2018 ರಲ್ಲಿ ನನ್ನ ಜಮೀನಿನಲ್ಲಿ ಎದುರುದಾರರು ಲೈನ್ ಎಳೆದಿದ್ದಾರೆ.

3. ನನ್ನ ಜಮೀನಿನಲ್ಲಿ 1 ಗುಂಟೆ ಜಮೀನಿಗೆ 2018ರಲ್ಲಿ ಬೆಲೆ 75,000/- ರೂ.ಗಳು ಇದೆ ಎಂದು ತೋರಿಸಲು ಇಲ್ಲಿ ದಾಖಲೆಯನ್ನು ಹಾಜರುಪಡಿಸಿದ್ದೇನೆ. ಸಾಕ್ಷಿಯು ಅವರು ಹಾಜರುಪಡಿಸಿರುವ ದಾಖಲೆಗಳನ್ನು ನೋಡಿ ಆ ದಾಖಲೆ ಇಲ್ಲವೆಂದು ಉತ್ತರಿಸಿದ್ದಾರೆ. ನನ್ನ ಜಮೀನಿನ ಅಪಮೌಲ್ಯ, ಬೆಳೆ ನಷ್ಟ ಪರಿಹಾರ, ಮರಗಳ ಬಾಬ್ತು ಪರಿಹಾರ ಎಲ್ಲಾ ಸೇರಿ ಎದುರುದಾರರು ನನಗೆ 2,66,409/- ರೂ.ಗಳನ್ನು ಕೊಟ್ಟಿದ್ದಾರೆ ಎಂದರೆ ಸರಿ. ಎದುರುದಾರರು ನನ್ನ ಜಮೀನಿಗೆ ಲೈನು ಎಳೆಯುವ ಕಾಲಕ್ಕೆ ಇದ್ದ ಸೂಕ್ತ ಬೆಲೆಯನ್ನು ನೀಡಿದ್ದರೂ ಸಹ ಹೆಚ್ಚಿನ ಪರಿಹಾರ ಕೇಳಿ, ನಾನು ಸುಳ್ಳು ಅರ್ಜಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.**

**ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ.**

(ಬಿ.ವಿ. ರೇಣುಕ)

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ರಾಮನಗರ.**